# <u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.</u>

ಸಿ.ಸಿ. ನಂಃ 615/2015 ಸಿ ಡಬ್ಲ್ಯೂ: 2 ಪಿ ಡಬ್ಲ್ಯೂ: 3

ಪ್ರಮಾಣವಚನ ಬೋಧಿಸಲಾಯಿತು ದಿಃ 19-02-2025

ಹೆಸರು : ಶಿವಶರಣಪ್ಪ

ತಂದೆ ಹೆಸರು : ನಾಗಪ್ಪ

ವಯಸ್ಸು : 75 ವರ್ಷ

ಉದ್ಯೋಗ : ವ್ಯವಸಾಯ

ವಾಸಸ್ಥಳ : ಸೇಡಂ

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ಚಾ ಸಾ 3 ರವರು ನನಗೆ ಪರಿಚಯ ಇಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ರೀತಿಯ ಮಾಹಿತಿ ಇರುವುದಿಲ್ಲ. ಪೋಲೀಸರು ನಮ್ಮ ಸಮಕ್ಷಮ ಯಾವುದೇ ರೀತಿಯ ಪಂಚನಾಮೆಗಳು ಮಾಡಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಜಪ್ತಿ ಪಂಚನಾಮೆಯಾಗಿದ್ದು, ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುತ್ತಾರೆ ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಸಾಕ್ಷಿಗೆ ಇನ್ನೊಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಗುನ್ನೆ ಸ್ದಳದ ಪಂಚನಾಮೆಯಾಗಿದ್ದು, ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುತ್ತಾರೆ ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಆದರೇ ನಿಪಿ-3 ಮತ್ತು 4 ರಲ್ಲಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ನಾನು ಸದರಿ ದಾಖಲಾತಿಗಳಿಗೆ ಸಹಿಯನ್ನು ಮಾಡಿರುತ್ತೇನೆ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**<u>ಪಾಟೀಸವಾಲುಃ</u>** ಮಾನ್ಯ ಸ.ಸ.ಅ ರವರಿಂದ:

ದಿಃ24-12-2013 ರಂದು ಸಾಯಂಕಾಲ 04-15 ರಿಂದ 04-45 ರ ವರೆಗೆ ನನ್ನ ಹಾಗೂ ಚಾಸಾ 3 ರವರ ಸಮಕ್ಷಮದಲ್ಲಿ ಪೊಲೀಸ್ ಠಾಣೆಯಲ್ಲಿ ಒಟ್ಟು 390 ಜಂಡೂಬಾಂಬ್

ಡಬ್ಬಿಗಳನ್ನು ವಶಕ್ಕೆ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಿಲ್ಲ. ಅದರಲ್ಲಿರುವ 4 ಡಬ್ಬಿಗಳನ್ನು ರಾಸಾಯನಿಕ ಪರೀಕ್ಷೆ ಕುರಿತು ಪ್ರತ್ಯೆಕವಾಗಿ ಒಂದು ಬಿಳಿ ಬಟ್ಟೆಯಲ್ಲಿ ಹಾಕಿ ಸೀಲು ಮಾಡಿ SDM ಅಂತಾ ಇಂಗ್ಲಿಷ್ ಮುದ್ರೆ ಹಾಕಿರುತ್ತಾರೆ ಎಂದರೆ ಸರಿಯಿಲ್ಲ. ಸಾಕ್ಷಿಗೆ ಸದರಿ ನಾಲ್ಕು ಜಂಡೂಬಾಂಬ್ ಡಬ್ಬಿಗಳನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿಲು ನಿರಾಕರಿಸಿರುತ್ತಾರೆ ಅದರಿಂದ ಅವುಗಳನ್ನು ಕ್ರಮವಾಗಿ ಮು ಮಾ 1 ರಿಂದ 8 ಎಂದು ಗುರುತಿಸಲಾಯಿತು.

ಅದೇ ರೀತಿ ದಿ. 24-12-2013 ರಂದು ಸಾಯಂಕಾಲ 05-00 ರಿಂದ 06-00 ಗಂಟೆಯ ವರೆಗೆ ಪೊಲೀರು ನನ್ನ ಹಾಗೂ ಚಾ ಸಾ 3 ರವರ ಸಮಕ್ಷಮ ಘಟನಾ ಸ್ಥಳದ ಪಂಚನಾಮೆಯನ್ನು ಮಾಡಿರುತ್ತಾರೆ ಎಂದರೆ ಸರಿಯಿಲ್ಲ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದ: ವಕೀಲರು ಪಾಟೀಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**